## ಚಿತ್ರದುರ್ಗ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಚೇರಿ

**ಅಧಿಸೂಚನೆ ಸಂಖ್ಯೆ: 03/2018, ದಿನಾಂಕ: 26.09.2018**

**ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ 03.11.2018 ಸಂಜೆ 5–00 ಗಂಟೆ.**

ವಿಷಯಃ– ಚಿತ್ರದುರ್ಗ ನ್ಯಾಯಾಂಗ ಘಟಕಕ್ಕೆ ಮಂಜೂರಾಗಿರುವ ಶೀಘ್ರಲಿಪಿಗಾರರು, ಬೆರಳಚ್ಚುಗಾರರು, ಬೆರಳಚ್ಚು–ನಕಲುಗಾರರು, ಆದೇಶ–ಜಾರಿಕಾರರ ಹಾಗೂ ಜವಾನರ ಹುದ್ದೆಗಳ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸುತ್ತಿರುವ ಬಗ್ಗೆಃ–

ಉಲ್ಲೇಖಃ–
1. ಸರ್ಕಾರಿ ಆದೇಶ ಸಂಖ್ಯೆಃ ಲಾ 156 ಎಲ್ಎಸಿ 2018, ದಿಃ 07.08.2018.
2. ಗೌರವಾನ್ವಿತ ಉಚ್ಚ ನ್ಯಾಯಾಲಯ, ಬೆಂಗಳೂರು ರವರ ಪತ್ರ ಸಂಖ್ಯೆಃ ಎಲ್‌ಸಿಎ/ಖಚ–128/2012, ದಿನಾಂಕ 18.09.2018.
3. ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮ ಹಾಗೂ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ ನೇಮಕಾತಿ) ನಿಯಮ, 1982.
4. ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೇ ಹುದ್ದೆಗಳ ನೇಮಕಾತಿ) (ತಿದ್ದುಪಡಿ) ನಿಯಮ, 2007.
5. ಈ ಕಚೇರಿ ಟಿಪ್ಪಣಿ ಹಾಗೂ ದಿನಾಂಕಃ 25.09.2018 ರ ಟಿಪ್ಪಣಿ ಮೇಲಿನ ಆದೇಶ.

– – –

ಚಿತ್ರದುರ್ಗ ನ್ಯಾಯಾಂಗ ಘಟಕಕ್ಕೆ ಮಂಜೂರಾಗಿರುವ ಶೀಘ್ರಲಿಪಿಗಾರರು, ಬೆರಳಚ್ಚುಗಾರರು, ಬೆರಳಚ್ಚು–ನಕಲುಗಾರರು, ಆದೇಶ–ಜಾರಿಕಾರರು ಹಾಗೂ ಜವಾನರ ಹುದ್ದೆಗಳ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದ್ದು, ಸದರಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಛಿಸಿರುವ ಅಭ್ಯರ್ಥಿಗಳು ಈ ಅಧಿಸೂಚನೆಯ ಜೊತೆಗೆ ಲಗತ್ತಿಸಿರುವ ನಿಗಧಿತ ಅರ್ಜಿ ನಮೂನೆಯಲ್ಲಿ ಬೆರಳಚ್ಚು ಅಥವಾ ಗಣಕೀಕೃತ ಅರ್ಜಿಯನ್ನು ರಚಿಸಿಕೊಂಡು ಅರ್ಜಿಯಲ್ಲಿ ಹುದ್ದೆಗೆ ಸಂಬಂಧಿಸಿದಂತೆ ಎಲ್ಲಾ ಅಂಕಣಗಳಲ್ಲಿ ಮಾಹಿತಿಯನ್ನು ಭರ್ತಿ ಮಾಡಿ **ದಿನಾಂಕಃ 03.11.2018** ರಂದು ಸಂಜೆ 5.00 ಗಂಟೆ ಸಮಯದೊಳಗಾಗಿ **ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಿತ್ರದುರ್ಗಕ್ಕೆ ತಲುಪುವಂತೆ ಸಲ್ಲಿಸತಕ್ಕದ್ದು.**

**ಅಧಿಸೂಚನೆ ಹಾಗೂ ಅರ್ಜಿ ನಮೂನೆಯನ್ನು** http://ecourts.gov.in/chitradurga **ಇಲ್ಲಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ.**

ಎ) ಸರ್ಕಾರಿ ಆದೇಶ ಸಂಖ್ಯೆಃಸಿಆಸುಇಃ08/ಸೇನೆನಿ/1995, ದಿನಾಂಕಃ20.06.1995

ಬಿ) ಸರ್ಕಾರದ ಅಧಿಸೂಚನೆ ಸಂಖ್ಯೆಃ ಡಿಪಿಎಆರ್ 52 ಎಸ್.ಆರ್.ಆರ್. 99, ದಿಃ 29.11.2002

ಸಿ) ಸರ್ಕಾರಿ ಆದೇಶ ಸಂಖ್ಯೆಃಸಿಆಸುಇಃ53/ಸೇನೆನಿ/2007, ದಿನಾಂಕಃ04.01.2008

ಡಿ) ಸರ್ಕಾರಿ ಆದೇಶ ಸಂಖ್ಯೆಃಸಿಆಸುಇಃ128/ಸೇನೆನಿ/2008, ದಿನಾಂಕಃ01.08.2009

ರ ಮೇಲ್ಕಂಡ ಸರ್ಕಾರಿ ಆದೇಶಗಳ ಅನುಸಾರ ಭರ್ತಿ ಮಾಡಬೇಕಾದ ಹುದ್ದೆಗಳ ವರ್ಗೀಕರಣವನ್ನು ಈ ಕೆಳಕಂಡಂತಿದೆ.

<u>ಶೀಘ್ರಲಿಪಿಗಾರರು</u> ಃ ಹುದ್ದೆಗಳ ಸಂಖ್ಯೆ–05

| | ವರ್ಗೀಕರಣ | ಮಹಿಳೆ | ಗ್ರಾಮೀಣ | ಕನ್ನಡ | ಒಟ್ಟು |
|---|---|---|---|---|---|
| 1 | ಸಾ.ಅ. | | 1 | 1 | 2 |
| 2 | 3ಬಿ | | 1 | | 1 |
| 3 | 2ಎ | 1 | | | 1 |
| 4 | 3ಎ | | 1 | | 1 |
| | | | | **ಒಟ್ಟು** | **5** |

<u>ಬೆರಳಚ್ಚುಗಾರರು</u> ಃ ಹುದ್ದೆಗಳ ಸಂಖ್ಯೆ–08

| | ವರ್ಗೀಕರಣ | ಮಹಿಳೆ | ಗ್ರಾಮೀಣ | ಕನ್ನಡ | ಅಂ.ವಿ. | ಯೋಜನಾನಿರಾಶ್ರಿತರು | ಒಟ್ಟು |
|---|---|---|---|---|---|---|---|
| 1 | ಸಾ.ಅ. | | 1 | 1 | 1 | 1 | 4 |
| 2 | ಪ.ಜಾ. | 1 | | | | | 1 |
| 3 | 2ಎ | 1 | | | | | 1 |
| 4 | ಪ.ಪಂ. | | | 1 | | | 1 |
| 5 | 3ಎ | | | 1 | | | 1 |
| | | | | | | **ಒಟ್ಟು** | **8** |

ಬೆರಳಚ್ಚು–ನಕಲುಗಾರರು ಃ ಹುದ್ದೆಗಳ ಸಂಖ್ಯೆ–06

| | ವರ್ಗೀಕರಣ | ಅರ್ಹ | ಮಹಿಳೆ | ಗ್ರಾಮೀಣ | ಅಂ.ಅ./ಅರ್ಹ | ಕ.ಮಾ. | ಒಟ್ಟು |
|---|---|---|---|---|---|---|---|
| 1 | ಸಾ.ಅ. | | 1 | 1 | | 1 | 3 |
| 2 | 2ಎ | | 1 | | 1 | | 2 |
| 3 | ಪ.ಜಾ. | | 1 | | | | 1 |
| | | | | | | **ಒಟ್ಟು** | **6** |

ಆದೇಶ–ಜಾರಿಕಾರರು ಃ ಹುದ್ದೆಗಳ ಸಂಖ್ಯೆ–08

| | ವರ್ಗೀಕರಣ | ಅರ್ಹ | ಮಹಿಳೆ | ಗ್ರಾಮೀಣ | ಅಂ.ಅ./ಅರ್ಹ | ಒಟ್ಟು |
|---|---|---|---|---|---|---|
| 1 | ಸಾ.ಅ. | 1 | 1 | 2 | | 4 |
| 2 | 2ಎ | | 1 | 1 | | 2 |
| 3 | ಪ.ಜಾ. | | | 1 | | 1 |
| 4 | ಪ್ರವರ್ಗ–1 | | | 1 | | 1 |
| | | | | | **ಒಟ್ಟು** | **08** |

**ಜವಾನರುಃ ಹುದ್ದೆಗಳ ಸಂಖ್ಯೆ ಃ 02**

| | **ವರ್ಗೀಕರಣ** | **ಮಹಿಳೆ** | ಯೋಜನಾನಿರಾಶ್ರಿತರು | **ಒಟ್ಟು** |
|---|---|---|---|---|
| **1** | **ಸಾ.ಅ.** | **1** | | **1** |
| **2** | **ಪ.ಜಾ.** | | **1** | **1** |
| | | | **ಒಟ್ಟು** | **2** |

# ಶೈಕ್ಷಣಿಕ ವಿದ್ಯಾರ್ಹತೆಃ

## 1. ಶೀಘ್ರಲಿಪಿಗಾರರ ಹುದ್ದೆಃ

1) ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.

2) ಕರ್ನಾಟಕ ಸಾರ್ವಜನಿಕ ಶಿಕ್ಷಣ ಇಲಾಖೆ ಅಥವಾ ಕರ್ನಾಟಕ ಸೆಕೆಂಡರಿ ಪ್ರೌಢ ಶಿಕ್ಷಣ ಪರೀಕ್ಷೆಗಳ ಮಂಡಳಿ ವತಿಯಿಂದ ನಡೆಸುವ ಕನ್ನಡ ಹಾಗೂ ಆಂಗ್ಲ ಬೆರಳಚ್ಚು ಪ್ರೌಢದರ್ಜೆ ಹಾಗೂ ಕನ್ನಡ ಹಾಗೂ ಆಂಗ್ಲ ಶೀಘ್ರಲಿಪಿ ಪ್ರೌಢದರ್ಜೆ ಪರೀಕ್ಷೆಗಳಲ್ಲಿ ಅಥವಾ ತತ್ಸಮಾನ ಪರೀಕ್ಷೆಗಳಲ್ಲಿ ಉತ್ತೀರ್ಣತೆ.

**ಅಥವಾ**

ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಸೆಕ್ರೆಟರಿಯಲ್ ಪ್ರಾಕ್ಟೀಸ್ ಪಠ್ಯಕ್ರಮದ ಡಿಪ್ಲೋಮಾ ಪದವಿಯೊಂದಿಗೆ ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ಹಾಗೂ ಶೀಘ್ರಲಿಪಿ ವಿಷಯಗಳನ್ನು ಐಚ್ಛಿಕ ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರಬೇಕು.

## 2. ಬೆರಳಚ್ಚುಗಾರರ ಹುದ್ದೆ ಃ

1. ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.
2. ಕರ್ನಾಟಕ ಸಾರ್ವಜನಿಕ ಶಿಕ್ಷಣ ಇಲಾಖೆ ಅಥವಾ ಕರ್ನಾಟಕ ಸೆಕೆಂಡರಿ ಪ್ರೌಢ ಶಿಕ್ಷಣ ಪರೀಕ್ಷೆಗಳ ಮಂಡಳಿ ವತಿಯಿಂದ ನಡೆಸುವ ಕನ್ನಡ ಹಾಗೂ ಆಂಗ್ಲ ಬೆರಳಚ್ಚು ಪ್ರೌಢದರ್ಜೆ ಅಥವಾ ತತ್ಸಮಾನ ಪರೀಕ್ಷೆಗಳಲ್ಲಿ ಉತ್ತೀರ್ಣತೆ.

**ಅಥವಾ**

ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಸೆಕ್ರೆಟರಿಯಲ್ ಪ್ರಾಕ್ಟೀಸ್ ಪಠ್ಯಕ್ರಮದ ಡಿಪ್ಲೋಮಾ ಪದವಿಯೊಂದಿಗೆ ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ವಿಷಯಗಳನ್ನು ಐಚ್ಛಿಕ ವಿಷಯವಾಗಿ ಉತ್ತೀರ್ಣರಾಗಿರಬೇಕು.

## 3. ಬೆರಳಚ್ಚು-ನಕಲುಗಾರರ ಹುದ್ದೆ ಃ

1. ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.
2. ಕರ್ನಾಟಕ ಸಾರ್ವಜನಿಕ ಶಿಕ್ಷಣ ಇಲಾಖೆ ಅಥವಾ ಕರ್ನಾಟಕ ಸೆಕೆಂಡರಿ ಪ್ರೌಢ ಶಿಕ್ಷಣ ಪರೀಕ್ಷೆಗಳ ಮಂಡಳಿ ವತಿಯಿಂದ ನಡೆಸುವ ಕನ್ನಡ ಹಾಗೂ ಆಂಗ್ಲ ಬೆರಳಚ್ಚು ಕಿರಿಯ ದರ್ಜೆ ಅಥವಾ ತತ್ಸಮಾನ ಪರೀಕ್ಷೆಗಳಲ್ಲಿ ಉತ್ತೀರ್ಣತೆ.

**ಅಥವಾ**

ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಸೆಕ್ರೆಟರಿಯಲ್ ಪ್ರಾಕ್ಟೀಸ್ ಪಠ್ಯಕ್ರಮದ ಡಿಪ್ಲೋಮಾ ಪದವಿಯೊಂದಿಗೆ ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ವಿಷಯಗಳನ್ನು ಐಚ್ಛಿಕ ವಿಷಯವಾಗಿ ಉತ್ತೀರ್ಣರಾಗಿರಬೇಕು.

## 4. ಆದೇಶ-ಜಾರಿಕಾರರ ಹುದ್ದೆಃ

1. 10ನೇ ತರಗತಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.
2. ಕನ್ನಡ ಭಾಷೆ ಓದಲು ಮತ್ತು ಬರೆಯಲು ಬರಬೇಕು.

## 5. ಜವಾನರ ಹುದ್ದೆ:

1. 7ನೇ ತರಗತಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.
2. ಕನ್ನಡ ಭಾಷೆ ಓದಲು ಮತ್ತು ಬರೆಯಲು ಬರಬೇಕು.
3. 7ನೇ ತರಗತಿ ಗ್ರೇಡ್ ಅಂಕಪಟ್ಟಿ ಪರಿಗಣಿಸಲಾಗುವುದಿಲ್ಲ. 7ನೇ ತರಗತಿ ಅಂಕಪಟ್ಟಿಯಲ್ಲಿ ನಿಗದಿ ಪಡಿಸಿದ ಗರಿಷ್ಟ ಅಂಕ ಹಾಗೂ ಅಭ್ಯರ್ಥಿ ಗಳಿಸಿರುವ ಅಂಕಗಳು ಸ್ಪಷ್ಟವಾಗಿ ನಮೂದಿಸಿರತಕ್ಕದ್ದು. **ಕೇವಲ** ಗ್ರೇಡ್ ಅಂಕಪಟ್ಟಿಯೊಂದಿಗೆ ಸಲ್ಲಿಸಿದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

## ಆಯ್ಕೆ ವಿಧಾನ:

ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮ ಹಾಗೂ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ ನೇಮಕಾತಿ) ನಿಯಮ, 1982 ಮತ್ತು ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ ನೇಮಕಾತಿ) (ತಿದ್ದುಪಡಿ) ನಿಯಮ, 2007ರನ್ವಯ :

ಶೀಘ್ರಲಿಪಿಗಾರರು, ಬೆರಳಚ್ಚುಗಾರರ ಹಾಗೂ ಬೆರಳಚ್ಚು-ನಕಲುಗಾರರ ಹುದ್ದೆಗಳಿಗೆ ಅಭ್ಯರ್ಥಿಗಳಿಗೆ ಈ ಕೆಳಕಂಡಂತೆ ಅರ್ಹತಾ ಪರೀಕ್ಷೆಯನ್ನು ಏರ್ಪಡಿಸಲಾಗುವುದು.

## ಶೀಘ್ರಲಿಪಿಗಾರರ ಅರ್ಹತಾ ಪರೀಕ್ಷೆ :

1. ಅಭ್ಯರ್ಥಿಯು ನೇಮಕಾತಿ ಪ್ರಾಧಿಕಾರದಿಂದ ನಾಮ ನಿರ್ದೇಶಿಸಲ್ಪಟ್ಟ ಅಧಿಕಾರಿಯವರಿಂದ ಪ್ರತಿ ನಿಮಿಷಕ್ಕೆ 120 ಪದಗಳ ವೇಗದಂತೆ 05 ನಿಮಿಷಗಳಲ್ಲಿ ನೀಡುವ ಉಕ್ತಲೇಖನವನ್ನು ಸುಮಾರು 45 ನಿಮಿಷದ ಕಾಲಾವಕಾಶದಲ್ಲಿ ಬೆರಳಚ್ಚು ಯಂತ್ರದಲ್ಲಿ ಲಿಪ್ಯಂತರಿಸತಕ್ಕದ್ದು,
2. ಈ ಪರೀಕ್ಷೆಯು ಗರಿಷ್ಟ 100 ಅಂಕಗಳದ್ದಾಗಿದ್ದು ಪರೀಕ್ಷೆಯಲ್ಲಿ ಉತ್ತೀರ್ಣತೆಗೆ ಕನಿಷ್ಟ 50 ಅಂಕಗಳನ್ನು ಪಡೆಯತಕ್ಕದ್ದು.

## ಬೆರಳಚ್ಚುಗಾರರ ಹುದ್ದೆಗಳಿಗೆ

1. ಅಭ್ಯರ್ಥಿಯು ನೇಮಕಾತಿ ಪ್ರಾಧಿಕಾರದಿಂದ ನಾಮ ನಿರ್ದೇಶಿಸಲ್ಪಟ್ಟ ಅಧಿಕಾರಿಯವರಿಂದ 15 ನಿಮಿಷಗಳ ಕಾಲ ಉಕ್ತಲೇಖನಕ್ಕೆ ಬೆರಳಚ್ಚು ಯಂತ್ರದಲ್ಲಿ ಬೆರಳಚ್ಚುಪಡಿಸತಕ್ಕದ್ದು,
2. ಈ ಪರೀಕ್ಷೆಯು ಗರಿಷ್ಟ 100 ಅಂಕಗಳದ್ದಾಗಿದ್ದು ಪರೀಕ್ಷೆಯಲ್ಲಿ ಉತ್ತೀರ್ಣತೆಗೆ ಕನಿಷ್ಟ 50 ಅಂಕಗಳನ್ನು ಪಡೆಯತಕ್ಕದ್ದು.

## ಬೆರಳಚ್ಚು-ನಕಲುಗಾರರ ಹುದ್ದೆಗಳಿಗೆ

1. ಅಭ್ಯರ್ಥಿಯು ನೇಮಕಾತಿ ಪ್ರಾಧಿಕಾರದಿಂದ ನಾಮ ನಿರ್ದೇಶಿಸಲ್ಪಟ್ಟ ಅಧಿಕಾರಿಯವರಿಂದ 15 ನಿಮಿಷಗಳ ಕಾಲ ಉಕ್ತಲೇಖನಕ್ಕೆ ಬೆರಳಚ್ಚು ಯಂತ್ರದಲ್ಲಿ ಬೆರಳಚ್ಚುಪಡಿಸತಕ್ಕದ್ದು,
2. ಈ ಪರೀಕ್ಷೆಯು ಗರಿಷ್ಟ 100 ಅಂಕಗಳದ್ದಾಗಿದ್ದು ಪರೀಕ್ಷೆಯಲ್ಲಿ ಉತ್ತೀರ್ಣತೆಗೆ ಕನಿಷ್ಟ 50 ಅಂಕಗಳನ್ನು ಪಡೆಯತಕ್ಕದ್ದು.

ಮೇಲೆ ಹೇಳಿದ ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡವಾರು ಅಂಕಗಳು ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಹಾಗೂ ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

**ಆದೇಶ–ಜಾರಿಕಾರರ ಹುದ್ದೆಗಳಿಗೆ ಃ**

ಆದೇಶ–ಜಾರಿಕಾರರ ಹುದ್ದೆಗೆ 10ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಗರಿಷ್ಟ ಅಂಕಗಳ ಅರ್ಹತೆಯ ಆಧಾರದ ಅನ್ವಯ 01 ಹುದ್ದೆಗೆ 25ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ಸಂದರ್ಶನದ ಪ್ರಕ್ರಿಯೆಗೆ ತೊಡಗಿಸಲಾಗುವುದು ಹಾಗೂ ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

**ಜವಾನರ ಹುದ್ದೆಗಳಿಗೆಃ**

ಜವಾನರ ಹುದ್ದೆಗೆ 7ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಗರಿಷ್ಟ ಅಂಕಗಳ ಅರ್ಹತೆಯ ಆಧಾರದ ಅನ್ವಯ 01 ಹುದ್ದೆಗೆ 10ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ಸಂದರ್ಶನದ ಪ್ರಕ್ರಿಯೆಗೆ ತೊಡಗಿಸಲಾಗುವುದು ಹಾಗೂ ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

## ಪರಿವೀಕ್ಷಣಾ ಅವಧಿಃ

ನೇಮಕ ಹೊಂದಿದ ಅಭ್ಯರ್ಥಿಗಳನ್ನು ಕರ್ನಾಟಕ ಸೇವಾ ನಿಯಮ, ಪರಿವೀಕ್ಷಣಾ ನಿಯಮ 1977ರ ಪ್ರಕಾರ 02 ವರ್ಷಗಳ ಪರಿವೀಕ್ಷಣಾ ಅವಧಿಯಲ್ಲಿರತಕ್ಕದ್ದು, ಹಾಗೂ ಸದರಿ ಅವಧಿಯಲ್ಲಿ ತಮ್ಮ ಹುದ್ದೆಗಳಿಗೆ ಯಾವುದಾದರೂ ಇಲಾಖಾ ಪರೀಕ್ಷೆಗಳಲ್ಲಿ ಹಾಗೂ ಕನ್ನಡ ಭಾಷಾ ಪರೀಕ್ಷೆಯಲ್ಲಿ ನಿಯಮದಡಿ ಗೊತ್ತುಪಡಿಸಿದರೆ ಅವುಗಳಲ್ಲಿ ಉತ್ತೀರ್ಣರಾಗತಕ್ಕದ್ದು.

## ಪಿಂಚಣಿ ಸೌಲಭ್ಯ:

ಸರ್ಕಾರದ ಆದೇಶ ಸಂಖ್ಯೆ: ಎಫ್.ಡಿ. (ಎಸ್.ಪಿ.ಎಲ್)/04/ಪಿ.ಇ.ಟಿ/2005, ದಿನಾಂಕ:31.03.2006 ರಂತೆ ಅನ್ವಯಿಸುವುದು.

## ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ವಿಧಾನ

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆಯುವುದರ ಮೂಲಕ ಅರ್ಜಿಯನ್ನು ಸಮುಚಿತ ಮಾರ್ಗದ ಮುಖಾಂತರ ಸಲ್ಲಿಸತಕ್ಕದ್ದು.

## ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ

ಕರ್ನಾಟಕ ಸರ್ಕಾರದ ಅಧಿಸೂಚನೆ ಸಂಖ್ಯೆ ಸಿಆಸುಇ 43 ಸೇವನೆ 2008, ದಿ: 07.03.2012 ಮತ್ತು ಸಿಆಸುಇ 15 ಸೇವನೆ 2017, ದಿ: 05.07.2017 ರನ್ವಯ ಆಯ್ಕೆಯಾದ ಶೀಘ್ರಲಿಪಿಗಾರರು, ಬೆರಳಚ್ಚುಗಾರರು, ಬೆರಳಚ್ಚು-ನಕಲುಗಾರರು ಕರ್ನಾಟಕ ಸರ್ಕಾರ ನಿಗದಿಪಡಿಸುವ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಶೇ. 50 ಅಂಕಗಳಿಗೆ ಕಡಿಮೆ ಇಲ್ಲದಂತೆ ಪಡೆದು, ನಿಗದಿತ ಅವಧಿಯಲ್ಲಿ ಉತ್ತೀರ್ಣರಾಗತಕ್ಕದ್ದು.

## ವೇತನ ಶ್ರೇಣಿ :

| | |
|---|---|
| ಶೀಘ್ರಲಿಪಿಗಾರರು | ರೂ. 27650-650-29600-750-32600-850-36000-950-39800-1100-46400-1250-52650 ಮತ್ತು ಇತರೆ ಭತ್ಯೆಗಳು |
| ಬೆರಳಚ್ಚುಗಾರರು | ರೂ.21400-500-22400-550-24600-600-27000-650-29600-750-32600-850-36000-950-39800-1100-42000 ಮತ್ತು ಇತರೆ ಭತ್ಯೆಗಳು |
| ಬೆರಳಚ್ಚು-ನಕಲುಗಾರರು | ರೂ.21400-500-22400-550-24600-600-27000-650-29600-750-32600-850-36000-950-39800-1100-42000 ಮತ್ತು ಇತರೆ ಭತ್ಯೆಗಳು |
| ಆದೇಶ-ಜಾರಿಕಾರರು | ರೂ.19950-450-20400-500-22400-550-24600-600-27000-650-29600-750-32600-850-36000-950-37900 ಮತ್ತು ಇತರೆ ಭತ್ಯೆಗಳು |
| ಜವಾನರು | ರೂ.17000-400-18600-450-20400-500-22400-550-24600- |

| | |
|---|---|
| | 600–27000–650–28950 ಮತ್ತು ಇತರೆ ಭತ್ಯೆಗಳು |

## ವಯೋಮಿತಿಃ–

**ಕನಿಷ್ಟ 18 ವರ್ಷಗಳು**

**ಗರಿಷ್ಟ :**

| | |
|---|---|
| ಸಾಮಾನ್ಯ ವರ್ಗ | 35 ವರ್ಷ, |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1 | 40 ವರ್ಷ |
| ಪ್ರವರ್ಗ 2ಎ, 2ಬಿ, 3ಎ, 3ಬಿ | 38 ವರ್ಷ |

1. ಅರ್ಜಿಗಳನ್ನು ಸ್ವೀಕರಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು ಕನಿಷ್ಟ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.
2. ಸರ್ಕಾರಿ ಸೇವೆಯಲ್ಲಿರುವವರಿಗೆ/ವಿಧವೆಯರಿಗೆ/ಅಂಗವಿಕಲರಿಗೆ ವಯೋಮಿತಿಯಲ್ಲಿ 10 ವರ್ಷಗಳ ಸಡಿಲಿಕೆ ಇರುತ್ತದೆ.
3. ಮಾಜಿ ಸೈನಿಕರಿಗೆ ಗರಿಷ್ಟ ವಯೋಮಿತಿ, ಅವನು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವವನೋ ಆ ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳು ಅಗುವುದೋ ಅಷ್ಟು ವರ್ಷಗಳ ಸಡಿಲಿಕೆ.
4. ವಿಧವೆಯಾಗಿದ್ದರೆ ಅವರು ಗರಿಷ್ಟ ವಯೋಮಿತಿ ಸೌಲಭ್ಯವನ್ನು ಕೋರುವವರು ವಿಧವೆಯೆಂಬ ಬಗ್ಗೆ ತಹಶೀಲ್ದಾರ್ ದರ್ಜೆಗೆ ಕಡಿಮೆ ಇಲ್ಲದ ಕಂದಾಯ ಪ್ರಾಧಿಕಾರದಿಂದ ಪ್ರಡೆದ ಪ್ರಮಾಣ ಪತ್ರಗಳನ್ನು ದ್ವಿಪ್ರತಿಯಲ್ಲಿ ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು.
5. ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ ಪಕ್ಷದಲ್ಲಿ ಗರಿಷ್ಟ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸೇವೆ ಸಲ್ಲಿಸಿದ್ದಾರೋ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ, ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು ಅನ್ವಯಿಸುತ್ತದೆ.

**ಸಾಮಾನ್ಯ ಸೂಚನೆಗಳುಃ–**

1) ಅಭ್ಯರ್ಥಿಯು ಈ ಅಧಿಸೂಚನೆಯಲ್ಲಿ ಲಗತ್ತಿಸಿದ ನಿಗದಿತ ಅರ್ಜಿ ನಮೂನೆಯಲ್ಲಿ ಬೆರಳಚ್ಚು ಮಾಡಿಸಿದ ಅಥವಾ ಗಣಕೀಕೃತ ಅರ್ಜಿಯನ್ನು ತನ್ನ ಕೈ ಬರವಣಿಗೆಯಲ್ಲಿ ಭರ್ತಿ ಮಾಡಿ ಸಲ್ಲಿಸತಕ್ಕದ್ದು.

2) ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಹಾಗೂ ಮೀಸಲಾತಿಯಡಿಯಲ್ಲಿ ಅರ್ಜಿ ಹಾಕಲು ಬಯಸುವವರು ಆಯಾ ಹುದ್ದೆಗಳಿಗೆ ಪ್ರತ್ಯೇಕವಾಗಿ ನಿಗದಿತ ಅರ್ಜಿ ನಮೂನೆಗಳಲ್ಲಿ ಅರ್ಜಿ ಸಲ್ಲಿಸತಕ್ಕದ್ದು.

3) ಅಭ್ಯರ್ಥಿಯು ಇತ್ತೀಚಿನ ಪಾಸ್‌ಪೋರ್ಟ್ ಸೈಜ್ ಫೋಟೋವನ್ನು ಅರ್ಜಿ ನಮೂನೆಯಲ್ಲಿ ತೋರಿಸಿರುವ ಜಾಗದಲ್ಲಿ ಅಂಟಿಸಿ ಅದರ ಮೇಲೆ ಸಹಿ ಮಾಡತಕ್ಕದ್ದು.

4) ಅರ್ಜಿ ನಮೂನೆಯೊಂದಿಗೆ ಸಲ್ಲಿಸಬೇಕಾಗಿರುವ ಶೈಕ್ಷಣಿಕ ವಿದ್ಯಾರ್ಹತೆಯ ಅಂಕಪಟ್ಟಿಗಳನ್ನು ಹಾಗೂ ಇತರ ಪ್ರಮಾಣ ಪತ್ರಗಳನ್ನು ಸ್ವಯಂ ದೃಢೀಕರಿಸಿ ಅರ್ಜಿಯೊಂದಿಗೆ ಸಲ್ಲಿಸತಕ್ಕದ್ದು. (ಮೂಲ ಪ್ರತಿಗಳನ್ನು ಲಗತ್ತಿಸುವ ಅವಶ್ಯಕತೆ ಇರುವುದಿಲ್ಲ,) ಲಗತ್ತೀಕರಿಸಿದ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸುವ ದಿನಾಂಕದ ಒಳಗೆ ಪಡೆ ದಿರಬೇಕು.

5) ಅಭ್ಯರ್ಥಿಗಳು ಅರ್ಜಿಯೊಂದಿಗೆ ತಮ್ಮ ನಡತೆ ಮತ್ತು ಶೀಲದ ಬಗ್ಗೆ ತಮ್ಮ ಸಂಬಂಧಿಯಲ್ಲದ ಸಮಾಜದ ಇಬ್ಬರು ಗಣ್ಯ ವ್ಯಕ್ತಿಗಳಿಂದ ಪಡೆದ ಎರಡು ಪ್ರಮಾಣ ಪತ್ರಗಳನ್ನು ಹಾಗೂ ಕೊನೆಯಲ್ಲಿ ವ್ಯಾಸಂಗ ಮಾಡಿದ ಶಾಲೆ/ವಿದ್ಯಾಲಯದಿಂದ ಪಡೆದ ಒಂದು ಪ್ರಮಾಣ ಪತ್ರವನ್ನು ಲಗತ್ತಿಸತಕ್ಕದ್ದು.

6} ಅಭ್ಯರ್ಥಿಗಳು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸಿರುವುದು ಕಂಡು ಬಂದಲ್ಲಿ ಅಂತಹವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

7} ಅಪೂರ್ಣವಾಗಿರುವ, ಸಹಿ ಮಾಡದ ಮತ್ತು ವಿದ್ಯಾರ್ಹತೆ, ಜನ್ಮ ದಿನಾಂಕ, ಮೀಸಲಾತಿ ಹಾಗೂ ವಯೋಮಿತಿ ರಿಯಾಯಿತಿ ಬಗ್ಗೆ ಸಂಬಂಧಪಟ್ಟ ದಾಖಲೆಗಳನ್ನು ಹೊಂದಿರದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

8} ಸರ್ಕಾರಿ ಮತ್ತು ಅರೆ ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ಅರ್ಜಿಗಳನ್ನು ಸಮುಚಿತ ಮಾರ್ಗದ ಮುಖಾಂತರ ಸಲ್ಲಿಸಬೇಕು. ಇಲ್ಲವಾದಲ್ಲಿ ಸದರಿ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

9} ಅಭ್ಯರ್ಥಿಗಳು ತಮ್ಮ ಅರ್ಜಿಯ ಜೊತೆ ಸ್ವ ವಿಳಾಸವಿರುವ ಲಕೋಟೆಯನ್ನು ಸಲ್ಲಿಸಬೇಕು ಸದರಿ ಲಕೋಟೆಯ ಮೇಲೆ ನೊಂದಾಯಿತ ಅಂಚೆಗೆ ತಗಲುವ ಅಂಚೆ ಚೀಟಿಯನ್ನು ಲಗತ್ತಿಸಿರಬೇಕು.

10} ಅರ್ಜಿದಾರರು ಯಾವ ಹುದ್ದೆಗಳಿಗೆ ಅರ್ಜಿಗಳನ್ನು ಸಲ್ಲಿಸುತ್ತಿದ್ದಾರೆಂಬುದನ್ನು **ದಪ್ಪ ಅಕ್ಷರಗಳಲ್ಲಿ ಲಕೋಟೆಯ ಮತ್ತು ಅರ್ಜಿಯ ಮೇಲೆ ತಪ್ಪದೇ ನಮೂದಿಸತಕ್ಕದ್ದು**.

11} ಸಂದರ್ಶನಕ್ಕೆ ಅರ್ಹತೆ ಗಳಿಸಿದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಸಂದರ್ಶನಕ್ಕೆ ಹಾಜರಾಗುವುದು.

12} ಅಭ್ಯರ್ಥಿಗೆ ಸಂದರ್ಶನಕ್ಕೆ ಹಾಜರಾಗಲು ಮಾಹಿತಿ ಸಿಗದಿದ್ದ ಪಕ್ಷದಲ್ಲಿ ಅವರು ಸಂದರ್ಶನಕ್ಕೆ ಹಾಜರಾಗಲು ಅನರ್ಹರೆಂದು ತಿಳಿಯತಕ್ಕದ್ದು. ಈ ಬಗ್ಗೆ ಯಾವುದೇ ಪತ್ರ ವ್ಯವಹಾರಗಳಿಗೆ ಅವಕಾಶವಿರುದಿಲ್ಲ.

13} ವಿವರ ತುಂಬಿರುವ ಅರ್ಜಿಗಳನ್ನು ಈ ಕಚೇರಿಯ ವಿರಾಮದ ವೇಳೆಯನ್ನು ಹೊರತುಪಡಿಸಿ ಕೆಲಸದ ವೇಳೆಯಲ್ಲಿ ಮಾತ್ರ ಸ್ವೀಕರಿಸಲಾಗುವುದು.

14) ಪರಿಶಿಷ್ಟ ಜಾತಿ/ಪಂಗಡದ ಅಭ್ಯರ್ಥಿಗಳು ನಮೂನೆ–ಡಿ ಯಲ್ಲಿ ಹಾಗೂ ಪ್ರವರ್ಗ–2–ಎ, 2–ಬಿ, 3–ಎ, 3–ಬಿ, ಗೆ ಸೇರಿದ ಅಭ್ಯರ್ಥಿಗಳು ನಮೂನೆ–ಎಫ್ ನಲ್ಲಿ ಮತ್ತು ಪ್ರವರ್ಗ–1 ಗೆ ಸೇರಿದ ಅಭ್ಯರ್ಥಿಗಳು ನಮೂನೆ–ಇ ನಲ್ಲಿ ಸಂಬಂಧಿಸಿದ ತಹಶೀಲ್ದಾರ್‌ರವರಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರದ ನೆರಳಚ್ಚು ಪ್ರತಿಯನ್ನು ಸಲ್ಲಿಸತಕ್ಕದ್ದು,

15) ಗ್ರಾಮೀಣಾ ಮೀಸಲಾತಿ ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ/98/ಸೇನಿನಿ/2005, ದಿನಾಂಕ:10.08.2005ರ ಪ್ರಕಾರ ನಿಗಧಿತ ನಮೂನೆ 2 ರಲ್ಲಿ ಅಧಿಕೃತ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿ ನೆರಳಚ್ಚು ಪ್ರತಿಯನ್ನು ಸಲ್ಲಿಸತಕ್ಕದ್ದು.

16) ವಿವಿಧ ಪ್ರವರ್ಗದಡಿ ಮಹಿಳಾ ಅಭ್ಯರ್ಥಿಗಳು, ಮಾಜಿ ಸೈನಿಕ ಅಭ್ಯರ್ಥಿಗಳು, ಅಂಗವಿಕಲ ಅಭ್ಯರ್ಥಿಗಳು, ಯೋಜನಾ ನಿರಾಶ್ರಿತ ಅಭ್ಯರ್ಥಿಗಳು, ಹಾಗೂ ಗ್ರಾಮೀಣ ಅಭ್ಯರ್ಥಿಗಳ ಮೀಸಲಾತಿಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದಿರುವ ಪಕ್ಷದಲ್ಲಿ ಆ ಹುದ್ದೆಗಳನ್ನು ಆಯಾ ಪ್ರವರ್ಗಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ಆಯಾ ಪ್ರವರ್ಗಗಳ ಇತರೆ ಅಭ್ಯರ್ಥಿಗಳೂ ಸಹ ಲಭ್ಯವಿಲ್ಲದಿರುವ ಪಕ್ಷದಲ್ಲಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಮೀಸಲಾದ ಹುದ್ದೆಗಳನ್ನು ಹೊರತುಪಡಿಸಿ, ಇನ್ನುಳಿದ ಹಿಂದುಳಿದ ವರ್ಗಗಳ ಹುದ್ದೆಗಳನ್ನು ಸಾಮಾನ್ಯ ವರ್ಗದ ಅಭ್ಯರ್ಥಿಗಳಿಂದ ತುಂಬಲಾಗುವುದು.

17) ಗ್ರಾಮೀಣಾ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ–2 ರ ಮೀಸಲಾತಿ ಪ್ರಮಾಣ ಪತ್ರದ ಜೊತೆ ನಮೂನೆ–1ರಲ್ಲಿ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ತಹಶೀಲ್ದಾರ್‌ರವರಿಂದ ಪಡೆದ ಪ್ರಮಾಣ ಪತ್ರದ ನೆರಳಚ್ಚು ಪ್ರತಿಯನ್ನು ಸಲ್ಲಿಸತಕ್ಕದ್ದು.

18) ಅಂಗವಿಕಲ ಮೀಸಲಾತಿ ಕೋರುವ ಅಭ್ಯರ್ಥಿಗಳು ದಿನಾಂಕ:19.05.2005ರ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ:115/ಸೇನ ನಿ/2005ರಲ್ಲಿ ನಿಗಧಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದು ನೆರಳಚ್ಚು ಪ್ರತಿಯನ್ನು ಸಲ್ಲಿಸತಕ್ಕದ್ದು.

19) ಮಾಜೀ ಸೈನಿಕರು ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ ಬಗ್ಗೆ ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

20) ಅರ್ಜಿ ನಮೂನೆಯು ಈ ಕಛೇರಿಯಲ್ಲಿ ಮಾರಾಟ ಮಾಡಲಾಗುವುದಿಲ್ಲ. ಅಭ್ಯರ್ಥಿಗಳು ಅರ್ಜಿಗಳನ್ನು http://ecourts.gov.in/chitradurga **ಇಲ್ಲಿಂದ ಡೌನ್‌ಲೋಡ್ ಮಾಡಿಕೊಂಡು ತುಂಬಿದ ಅರ್ಜಿಗಳನ್ನು ಇತರೆ ದಾಖಲಾತಿ ಪ್ರತಿಗಳೊಂದಿಗೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಚಿತ್ರದುರ್ಗ, ಇವರಿಗೆ ನಿಗದಿತ ದಿನಾಂಕ ಹಾಗೂ ಸಮಯದೊಳಗಾಗಿ ತಲುಪುವಂತೆ ಸಲ್ಲಿಸಬಹುದಾಗಿದೆ.** ಕೊನೆಯ ದಿನಾಂಕದ ನಂತರ ಬರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**ಸಹಿ/-**
(ಎಸ್.ಬಿ.ವಸ್ತ್ರಮಠ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿತ್ರದುರ್ಗ.

**ಪ್ರತಿಯನ್ನು :**

ಮಾನ್ಯ ವಿಲೇಖನಾಧಿಕಾರಿಗಳು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು. ಇವರಿಗೆ(ಪತ್ರದೊಂದಿಗೆ) ಸಲ್ಲಿಸಲಾಗಿದೆ.

**ಅಧಿಸೂಚನೆಯ ಪ್ರತಿಯನ್ನು ತಮ್ಮ ಕಛೇರಿಗೆ ರವಾನಿಸುತ್ತಾ ವಿನಂತಿಸುವುದೇನೆಂದರೆ, ತಮ್ಮ ಕಛೇರಿಯ ಸೂಚನ ಫಲಕದಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಲಗತ್ತಿಸಲು ಕೋರಲಾಗಿದೆಃ-**

(1) ರಾಜ್ಯದ ಎಲ್ಲಾ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರುಗಳಿಗೆ, ತಮ್ಮ ನ್ಯಾಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ವಿನಂತಿ. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ------------------------------------

(2) ನಿರ್ದೇಶಕರು, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ, ಬೆಂಗಳೂರು.

(3) ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಚಿತ್ರದುರ್ಗ.

(4) ಈ ಜಿಲ್ಲೆಯ ಎಲ್ಲಾ ನ್ಯಾಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು

(5) ಕರ್ನಾಟಕ ರಾಜ್ಯ ಗೆಜೆಟ್ ಪ್ರಕಟಣೆಗಾಗಿ ಪ್ರಕಟಿಸಲು.

(6) ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಕರ್ನಾಟಕ ರಾಜ್ಯ ವಾರ್ತಾ ಪತ್ರದಲ್ಲಿ ಪ್ರಕಟಿಸುವ ಸಲುವಾಗಿ

(7) ಜಿಲ್ಲಾ ಉದ್ಯೋಗ ವಿನಿಮಯ ಅಧಿಕಾರಿಗಳು ಚಿತ್ರದುರ್ಗ, ಚಿತ್ರದುರ್ಗ ಜಿಲ್ಲೆ.

(8) ಜಿಲ್ಲಾಧಿಕಾರಿಗಳು, ಚಿತ್ರದುರ್ಗ, ಚಿತ್ರದುರ್ಗ ಜಿಲ್ಲೆ.

(9) ಆಯುಕ್ತರು, ನಗರಸಭಾ ಕಾರ್ಯಾಲಯ, ನಗರಸಭೆ, ಚಿತ್ರದುರ್ಗ

(10) ತಹಶೀಲ್ದಾರರು, ತಹಶೀಲ್ದಾರ್‌ರವರ ಕಛೇರಿ ಚಿತ್ರದುರ್ಗ.

(11) ಈ ನ್ಯಾಯಾಲಯದ ಸೂಚನಾ ಫಲಕಕ್ಕೆ.

## <u>ಅರ್ಜಿ ನಮೂನೆ</u>

ಭಾವಚಿತ್ರ

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿತ್ರದುರ್ಗ ಜಿಲ್ಲೆ , ಚಿತ್ರದುರ್ಗ – ಇವರಿಗೆ.

ಮಾನ್ಯರೆ,

ಚಿತ್ರದುರ್ಗ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಅಧಿಸೂಚನೆ ಸಂಖ್ಯೆಃ 03/2018, ದಿನಾಂಕಃ 26.09.2018 ರ ಪ್ರಕಾರ ________________ ಹುದ್ದೆಗೆ ನಾನು ____________ ಮೀಸಲಾತಿಯ ವರ್ಗದಡಿಯಲ್ಲಿ ಆಯ್ಕೆಯನ್ನು ಬಯಸಿ ಈ ಮೂಲಕ ನನ್ನ ವಿವರಗಳೊಂದಿಗೆ ಅರ್ಜಿ ಸಲ್ಲಿಸಿರುತ್ತೇನೆ.

| | | | | | |
|---|---|---|---|---|---|
| 1 | ಅಭ್ಯರ್ಥಿಯ ಹೆಸರು | | | | |
| 2 | ತಂದೆಯ/ತಾಯಿಯ/ಗಂಡನ ಹೆಸರು | | | | |
| 3 | ಪೂರ್ಣ ವಿಳಾಸ | | | | |
| 4 | ವಯಸ್ಸು ಮತ್ತು ಜನ್ಮ ದಿನಾಂಕ | | | | |
| 5 | ಲಿಂಗ ಪುರುಷ/ಮಹಿಳೆ | | | | |
| 6 | ರಾಷ್ಟ್ರೀಯತೆ :<br>ಮತ :<br>ಜಾತಿ/ಉಪಜಾತಿ : | | | | |
| 7 | ಯಾವ ಹುದ್ದೆಗೆ ಅರ್ಜಿ ಸಲ್ಲಿಸಲು ಇಚ್ಛಿಸಿರುವುದರ ಬಗ್ಗೆ ನಮೂದಿಸುವುದು | | | | |
| 8 | ಯಾವ ಮೀಸಲಾತಿಯಡಿಯಲ್ಲಿ ನೇಮಕಾತಿ ಅಪೇಕ್ಷಿಸುವಿರಿ? | | | | |
| 9 | ಶೈಕ್ಷಣಿಕ ವಿದ್ಯಾರ್ಹತೆಯ ವಿವರಗಳು :–(ಸ್ವಯಂ ದೃಢೀಕೃತ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು) | | | | |
| | ಉತ್ತೀರ್ಣ ಹೊಂದಿದ ಪರೀಕ್ಷೆಗಳು | ಉತ್ತೀರ್ಣ ಹೊಂದಿದ ವರ್ಷ ಮತ್ತು ನೊಂದಣಿ ಸಂಖ್ಯೆ | ಗರಿಷ್ಟ ಅಂಕಗಳು | ಪಡೆದಿರುವ ಅಂಕಗಳು | ಶೇಕಡವಾರು ಅಂಕಗಳು |
| ಎ | ಎಸ್.ಎಸ್.ಎಲ್.ಸಿ/ತತ್ಸಮಾನ ತರಗತಿ ಪರೀಕ್ಷೆ | | | | |
| ಬಿ | ಹಿರಿಯ ದರ್ಜೆ ಕನ್ನಡ ಮತ್ತು ಆಂಗ್ಲ ಶೀಘ್ರಲಿಪಿ ಪರೀಕ್ಷೆ. | | | | |
| ಸಿ | ಹಿರಿಯ ದರ್ಜೆ ಕನ್ನಡ ಮತ್ತು ಆಂಗ್ಲ ಬೆರಳಚ್ಚು ಪರೀಕ್ಷೆ. | | | | |
| ಡಿ | ಕಿರಿಯ ದರ್ಜೆ ಕನ್ನಡ ಮತ್ತು ಆಂಗ್ಲ ಬೆರಳಚ್ಚು ಪರೀಕ್ಷೆ. | | | | |
| ಇ | 7ನೇ ತರಗತಿ ಪರೀಕ್ಷೆ | | | | |
| 10 | ಜಾತಿ/ಗ್ರಾಮೀಣ/ಮಾಜಿ ಸೈನಿಕ/ಅಂಗವಿಕಲ/ ವಿಧವೆ ಮೀಸಲಾತಿ ಸೌಲಭ್ಯ ಪಡೆಯ ಬಯಸುವ ಅಭ್ಯರ್ಥಿಗಳು ಸಂಬಂಧಪಟ್ಟ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ | | | | |
| 11 | ನೀವು ಪ್ರಸ್ತುತ ಸರ್ಕಾರಿ ಸೇವೆಯಲ್ಲಿರುವಿರಾ (ನಿರಾಪೇಕ್ಷಣಾ ಪ್ರಮಾಣ ಪತ್ರ ಲಗತ್ತಿಸುವುದು) ? | | | | |
| 12 | ಸ್ವ–ವಿಳಾಸದ ಲಕೋಟೆಯ ಮೇಲೆ ನೊಂದಾಯಿತ ಅಂಚೆಗೆ ತಗಲುವ ಅಂಚೆ ಚೀಟಿಯನ್ನು ಲಗತ್ತಿಸಿರುತ್ತೀರಾ? | | | | |
| 13 | ಅರ್ಜಿ ಸಲ್ಲಿಸಲು ಇಚ್ಚೆ ಪಡುವ ಇತರೆ ಯಾವುದಾದರು ವಿವರಗಳುಃ | | | | |

**<u>ಸೂಚನೆಃ</u>–** ಅಭ್ಯರ್ಥಿಯು ತನಗೆ ಅನ್ವಯವಾಗದ್ದನ್ನು ಹೊಡೆದು ಹಾಕುವುದು.

.. ಪುಟ 2)

## **ಘೋಷಣೆ**

ಈ ಮೇಲೆ ನಮೂದಿಸಿರುವ ಮಾಹಿತಿ ಮತ್ತು ವಿವರಗಳು ನನಗೆ ತಿಳಿದ ಮಟ್ಟಿಗೆ ಸತ್ಯವಾಗಿದ್ದು ಹಾಗೂ ಒಂದು ವೇಳೆ ಅವು ಅಸತ್ಯವೆಂದು ಕಂಡು ಬಂದಲ್ಲಿ ನನ್ನ ಅಭ್ಯರ್ಥಿತನವನ್ನು ಬಿಟ್ಟು ಬಿಡಲು ಹಾಗೂ ಅಗತ್ಯ ಶಿಸ್ತಿನ ಕ್ರಮ ಎದುರಿಸಲು ನಾನು ಬದ್ದನಾಗಿರುತ್ತೇನೆ/ ಬದ್ದಳಾಗಿರುತ್ತೇನೆ. ನಾನು ಆಯ್ಕೆಗೊಂಡರೆ ಚಿತ್ರದುರ್ಗ ಜಿಲ್ಲಾ ಘಟಕದ ಯಾವುದೇ ನ್ಯಾಯಾಲಯಗಳಲ್ಲಿ ಕರ್ತವ್ಯ ನಿರ್ವಹಿಸಲು ಸಿದ್ದನಿದ್ದೇನೆ/ಸಿದ್ದಳಿದ್ದೇನೆ.

ಸ್ಥಳಃ

ದಿನಾಂಕಃ ಅಭ್ಯರ್ಥಿಯ ಸಹಿ.

## **ಅಭ್ಯರ್ಥಿಯು ಸರ್ಕಾರಿ ನೌಕರನಾಗಿದ್ದ ಪಕ್ಷದಲ್ಲಿ ನೇಮಕಾತಿ ಪ್ರಾಧಿಕಾರಗಳ ದೃಢೀಕರಣ ಪತ್ರ**

ಶ್ರೀ/ಶ್ರೀಮತಿ ಇವರ ನಮ್ಮ ಇಲಾಖೆಯಲ್ಲಿ ದಿನಾಂಕಃ ರಿಂದ ರವರೆಗೆ ಸೇವೆ ಸಲ್ಲಿಸುತ್ತಿದ್ದು ಅಭ್ಯರ್ಥಿಯ ನಡೆತೆಯು ಉತ್ತಮವಾಗಿದ್ದು ಹುದ್ದೆಗೆ ಅರ್ಹರಿರುತ್ತಾರೆ ಮತ್ತು ಹುದ್ದೆಗೆ ಅರ್ಜಿ ಸಲ್ಲಿಸಲು ಅನುಮತಿಯನ್ನು ನೀಡಲಾಗಿದೆ.

ಸ್ಥಳಃ

ಪ್ರಾಧಿಕಾರದ ಸಹಿ